**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 2 ಗ್ರಾಪಂಸಿ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:25-05-2017

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**

ಎಲ್ಲಾ ಜಿಲ್ಲಾ ಪಂಚಾಯಿತಿಗಳ
ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು.

**ಮಾನ್ಯರೆ,**

**ವಿಷಯ:** ಕರವಸೂಲಿಗಾರರು ಮತ್ತು ವಾಟರ್‌ಮೆನ್ ಹುದ್ದೆಗಳ ನೇಮಕಾತಿ ವಿದ್ಯಾರ್ಹತೆ ಬಗ್ಗೆ.- ಸ್ಪಷ್ಟೀಕರಣ.

**ಉಲ್ಲೇಖ:**
1) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 141 ಗ್ರಾಪಂಕಾ 2012 ದಿನಾಂಕ: 18-06-2012
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಸಿ 2014, ದಿನಾಂಕ:10-09-2014.
3) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 60 ಗ್ರಾಪಂಸಿ 2016 ದಿನಾಂಕ: 24-05-2016.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (3) ರ ಸರ್ಕಾರದ ಪತ್ರದಲ್ಲಿ ನೀಡಿರುವ ಸ್ಪಷ್ಟೀಕರಣವನ್ನು ಹಿಂಪಡೆದು ಉಲ್ಲೇಖ(1) ಮತ್ತು ಉಲ್ಲೇಖ (2) ರ ಸರ್ಕಾರದ ಪತ್ರ ಹಾಗೂ ಆದೇಶದಂತೆ ಗ್ರಾಮ ಪಂಚಾಯಿತಿಗಳ ಕರವಸೂಲಿಗಾರರು ಮತ್ತು ವಾಟರ್‌ಮೆನ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದ ವಿದ್ಯಾರ್ಹತೆ ಬಗ್ಗೆ ಈ ಕೆಳಕಂಡಂತೆ ಸ್ಪಷ್ಟೀಕರಣ ನೀಡಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

1. ವಾಟರ್‌ಮೆನ್/ ಪಂಪ್ ಆಪರೇಟರ್ ಕಂ ಮೆಕಾನಿಕ್ ಕಂ ನೀರಿನ ಕರ ವಸೂಲಿಗಾರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.
2. ವಾಟರ್‌ಮೆನ್/ಪಂಪ್ ಆಪರೇಟರ್/ ಜವಾನ ಈ ಅನುಕ್ರಮಣಿಕೆಯಲ್ಲಿ, ಆಯಾ ವೃಂದಗಳಲ್ಲಿ ಸತತವಾಗಿ ಕನಿಷ್ಠ 5 ವರ್ಷಗಳ ಸೇವೆ ಸಲ್ಲಿಸಿರುವ ನೌಕರರಿಗೆ ಬಿಲ್ ಕಲೆಕ್ಟರ್ ಹುದ್ದೆಗೆ ಮುಂಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿದ್ದು, ಸದರಿ ನೌಕರರಿಗೆ ಸೇವಾ ಜೇಷ್ಠತೆಯ ಆಧಾರದ ಮೇಲೆ ಮುಂಬಡ್ತಿ ನೀಡಬೇಕಾಗಿರುತ್ತದೆ.
3. ಬಿಲ್ ಕಲೆಕ್ಟರ್ ಹುದ್ದೆಗೆ ಮುಂಬಡ್ತಿಗಾಗಿ ಅರ್ಹ ವ್ಯಕ್ತಿಗಳು ಲಭ್ಯವಿಲ್ಲದಿದ್ದಲ್ಲಿ ಮಾತ್ರ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಪಿ.ಯು.ಸಿ.ಯಲ್ಲಿ ತೇರ್ಗಡೆ ಹಾಗೂ ಕಂಪ್ಯೂಟರ್ ಪರಿಣಿತಿಯನ್ನು ವಿದ್ಯಾರ್ಹತೆ ಹೊಂದಿರುವವರನ್ನು ಪರಿಗಣಿಸಿ ನೇರ ನೇಮಕಾತಿ ಮಾಡಲು ಗ್ರಾಮ ಪಂಚಾಯಿತಿಗಳು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ಕ್ರಮ ವಹಿಸತಕ್ಕದ್ದು.

ತಮ್ಮ ವಿಶ್ವಾಸಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ: ಗಣಕ ಶಾಖೆ